**<u>ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ಚನ್ನರಾಯಪಟ್ಟಣ</u>**

**<u>ಸಿಸಿ ಸಂಖ್ಯೆ: 912/2024</u>**

**<u>ಪಿರ್ಯಾದಿದಾರರು:</u>** ರಾಜ್ಯ ಪರ ಪೊಲೀಸರು,
ಚನ್ನರಾಯಪಟ್ಟಣ ನಗರ ಪೋಲೀಸ್ ಠಾಣೆ

**ವಿರುದ್ದ**

**<u>ಆರೋಪಿತರು:</u>**
1. **ರೂಪ ಜಿ.ಜಿ ಬಿನ್ ಹರೀಶ ಕುಮಾರ**
2. ಹರೀಶ ಕುಮಾರ ಬಿನ್ ನಂಜೇಗೌಡ

**<u>ದೋಷಾರೋಪಣೆ</u>**

**ಶ್ರೀಮತಿ ಕುಸುಮ ವಿ.,** ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ. ಚನ್ನರಾಯಪಟ್ಟಣ ಆದ ನಾನು ಆರೋಪಿಗಳಾದ ನಿಮ್ಮ ಮೇಲೆ ಹೊರಿಸುವ ದೋಷಾರೋಪಣೆ ಏನೆಂದರೆ,

ದಿನಾಂಕ: 19.06.2024 ರಂದು ಮಧ್ಯಹ್ನ 12.30 ಗಂಟೆ ಸಮಯದಲ್ಲಿ, ಚನ್ನರಾಯಪಟ್ಟಣ ನಗರ ಪೋಲೀಸ್ ಠಾಣಾ ಸರಹದ್ದಿಗೆ ಸೇರಿದ, ಮಾದೇಗೌಡನಕೊಪ್ಪಲು ಗ್ರಾಮದಲ್ಲಿ ಆರೋಪಿತರಾದ ನೀವು ಸಮಾನ ಉದ್ದೇಶದಿಂದ ಸಾಕ್ಷಿ.1 ರವರ ಮನೆಯ ಮುಂದೆ ಗಿಡವನ್ನು ಕಿತ್ತು ಹಾಕಿದ ವಿಚಾರಕ್ಕೆ ಸಾಕ್ಷಿ.1 ರವರನ್ನು ಕುರಿತು ಅವರು ಕುಪಿತರಾಗಿ ಶಾಂತಿಭಂಗವನ್ನುಂಟುಮಾಡಲಿ ಎಂಬ ಉದ್ದೇಶದಿಂದ, ಸಾಕ್ಷಿ.1 ರವರಿಗೆ ಲೋಫರ್ ಮುಂಡೆ ಎಂದು ಅವಾಚ್ಯ ಶಬ್ದಗಳಿಂದ ಬೈದು, ಆ ಮೂಲಕ ಆರೋಪಿಗಳಾದ ನೀವು **ಭಾರತೀಯ ದಂಡ ಸಂಹಿತೆ ಕಲಂ: 504 ಸಹವಾಚಕ 34** ರಡಿಯಲ್ಲಿ ದಂಡನೀಯವಾದ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಬರುವಂತೆ ಎಸಗಿರುತ್ತೀರಿ.

**2)** ಅದೇ ದಿನ, ಅದೇ ಸ್ಥಳ, ಅದೇ ಸಮಯದಲ್ಲಿ ಆರೋಪಿಗಳಾದ ನೀವು ಸಮಾನ ಉದ್ದೇಶವನ್ನು ಹೊಂದಿ, ಆರೋಪಿತರಾದ ನೀವು ನಿಮ್ಮ ಸ್ವ ಇಚ್ಚೆಯಿಂದ ಸಾಕ್ಷಿ.1 ರವರ ಮೈಕೈಗೆ ನಿಮ್ಮ ಕೈಗಳಿಂದ ಹೊಡೆದು ಸಾಮಾನ್ಯ ಸ್ವರೂಪದ ಗಾಯಪಡಿಸಿ, ಆ ಮೂಲಕ ಆರೋಪಿಗಳಾದ ನೀವು **ಭಾರತೀಯ ದಂಡ ಸಂಹಿತೆ ಕಲಂ: 323 ಸಹವಾಚಕ 34** ರಡಿಯಲ್ಲಿ ದಂಡನೀಯವಾದ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಬರುವಂತೆ ಎಸಗಿರುತ್ತೀರಿ.

**3)** ಅದೇ ಸ್ಥಳ ದಿ:20.06.2024 ರಂದು ಬೆಳಿಗ್ಗೆ 10.00 ಆರೋಪಿಗಳಾದ ನೀವು ಸಮಾನ ಉದ್ದೇಶವನ್ನು ಹೊಂದಿ, 1 ಮತ್ತು 2 ನೇ ಆರೋಪಿತರಾದ ನೀವು ನಿಮ್ಮ ಸ್ವ ಇಚ್ಚೆಯಿಂದ ಕಲ್ಲಿನಿಂದ ಸಾಕ್ಷಿ.1 ರವರಿಗೆ ಹೊಡೆದು ಸಾಮಾನ್ಯ ಸ್ವರೂಪದ ಗಾಯಪಡಿಸಿ, ಆ ಮೂಲಕ ಆರೋಪಿಗಳಾದ ನೀವು **ಭಾರತೀಯ ದಂಡ ಸಂಹಿತೆ ಕಲಂಃ 324 ಸಹವಾಚಕ 34** ರಡಿಯಲ್ಲಿ ದಂಡನೀಯವಾದ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಬರುವಂತೆ ಎಸಗಿರುತ್ತೀರಿ.

**4)** ಅದೇ ದಿನ, ಅದೇ ಸ್ಥಳ, ಅದೇ ಸಮಯದಲ್ಲಿ ಆರೋಪಿರಾದ ನೀವು ಸಮಾನ ಉದ್ದೇಶವನ್ನು ಹೊಂದಿ, ಸಾಕ್ಷಿ.1 ಮತ್ತು 2 ರವರಿಗೆ ಕೊಲೆ ಬೆದರಿಕೆ ಹಾಕಿ ಅಪರಾಧಿಕ ಭಯೋತ್ಪಾದನೆ ಉಂಟು ಮಾಡಿ, ಆ ಮೂಲಕ ಆರೋಪಿಗಳಾದ ನೀವು **ಭಾರತೀಯ ದಂಡ ಸಂಹಿತೆ ಕಲಂಃ 506 ಸಹವಾಚಕ 34** ರಡಿಯಲ್ಲಿ ದಂಡನೀಯವಾದ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಬರುವಂತೆ ಎಸಗಿರುತ್ತೀರಿ.

**ಪ್ರಶ್ನೆಃ** 1. ಈಗ ನಿಮಗೆ ಓದಿ ಹೇಳಲಾದ ನಿಮ್ಮ ಮೇಲಿನ ದೋಷಾರೋಪಣೆ ನಿಮಗೆ ತಿಳಿಯಿತೆ ?

1 ನೇ ಆರೋಪಿಯ ಉತ್ತರಃ

2 ನೇ ಆರೋಪಿಯ ಉತ್ತರಃ

**ಪ್ರಶ್ನೆಃ** 2. ನೀವು ನಿಮ್ಮ ತಪ್ಪನ್ನು ಒಪ್ಪಿಕೊಳ್ಳುವಿರಾ ಅಥವಾ ವಿಚಾರಣೆ ನಡೆಯಲೆಂದು ಬಯಸುತ್ತೀರಾ ?

1 ನೇ ಆರೋಪಿಯ ಉತ್ತರಃ

2 ನೇ ಆರೋಪಿಯ ಉತ್ತರಃ

(ಈ ದೋಷರೋಪಣೆಯನ್ನು ತೆರೆದ ನ್ಯಾಯಾಲಯದಲ್ಲಿ ಆರೋಪಿ/ಗಳಿಗೆ ತಿಳಿದಿರುವ ಭಾಷೆಯಲ್ಲಿ ಓದಿ ಹೇಳಿ ಕೇಳಲಾಗಿ ಆರೋಪಿ/ಗಳು ನೀಡಿರುವ ಉತ್ತರಗಳನ್ನು ಪಡೆದುಕೊಂಡಿದ್ದು ಅವು ಸರಿ ಇವೆ ಎಂದು ದೃಢೀಕರಿಸಲಾಯಿತು)

ದಿನಾಂಕಃ **23.08.2025**

(ಶ್ರೀಮತಿ ಕುಸುಮ ವಿ.)
ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಚನ್ನರಾಯಪಟ್ಟಣ.